# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ____________

ಪತ್ರಿಕೆಯ ಹೆಸರು : NAME OF THE NEWS PAPER: ____________ ದಿನಾಂಕ : DATE : ____________

# ಸದನದಲ್ಲೇ ಅಂಗಿ ಬಿಚ್ಚಿದ ಶಾಸಕ ಸಂಗಮೇಶ್



5/3/21

ವಿಧಾನಸಭೆ: ಒಂದು ರಾಷ್ಟ್ರ-ಒಂದು ಚುನಾವಣೆ ವಿಶೇಷ ಚರ್ಚೆಯ ಅಧಿವೇಶನದ ವೇಳೆ ಭದ್ರಾವತಿ ಶಾಸಕ ಬಿ.ಕೆ.ಸಂಗಮೇಶ್ ಅವರು ತಮ್ಮ ಕ್ಷೇತ್ರದಲ್ಲಿ ಸಂಭವಿಸಿದ ಗಲಭೆ ಪ್ರಕರಣದಲ್ಲಿ ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ವಿರುದ್ಧ ಗಂಭೀರ ಪ್ರಕರಣಗಳನ್ನು ದಾಖಲಿಸಿರುವ ಪೊಲೀಸರ ಕ್ರಮವನ್ನು ಖಂಡಿಸಿ ತಮ್ಮ ಅಂಗಿ ಬಿಚ್ಚಿ ಪ್ರತಿಭಟನೆ ನಡೆಸಲು ಮುಂದಾದ ಘಟನೆ ಗುರುವಾರ ವಿಧಾನಸಭೆಯಲ್ಲಿ ನಡೆಯಿತು.

ಒಂದು ರಾಷ್ಟ್ರ-ಒಂದು ಚುನಾವಣೆ ಚರ್ಚೆ ವೇಳೆ ಕಾಂಗ್ರೆಸ್ ಪ್ರತಿಭಟನೆ ಮಾಡುವಾಗ, ಶಾಸಕ ಸಂಗಮೇಶ ತಮ್ಮ ಅಂಗಿಯನ್ನು ಬಿಚ್ಚಿದರು. ಇದರಿಂದ ತೀವ್ರ ಕೋಪಗೊಂಡ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಕಾಂಗ್ರೆಸ್ ಸದಸ್ಯರ ವರ್ತನೆಯಿಂದ ಇಡೀ ಸದನದ ಗೌರವಕ್ಕೆ ಧಕ್ಕೆ ಬರುತ್ತಿದೆ. ಅಷ್ಟೇ ಅಲ್ಲ, ಕಾಂಗ್ರೆಸಿಗರು ಸದಸ್ಯರ ಇಂತಹ ವರ್ತನೆಯನ್ನು ಸಮರ್ಥಿಸಿಕೊಳ್ಳುವುದು ಖೇದಕರ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಸಂಗಮೇಶ ವರ್ತನೆಯಿಂದ ಕಿಡಿಕಿಡಿಯಾದ ಕಾಗೇರಿ, 'ಏನ್ರಿ, ಇದು ನೀವು ನಡೆದುಕೊಳ್ಳುವ ರೀತಿ? ಒಂದು ಕ್ಷೇತ್ರವನ್ನು ಪ್ರತಿನಿಧಿಸುವ ಶಾಸಕರಾಗಿ ನಿಮ್ಮನ್ನು ಆರಿಸಿ ಕಳಿಸಿದ ಜನಕ್ಕೆ ಅವಮಾನ ಮಾಡಿದಿರಿ' ಎಂದರು. ಇಷ್ಟಕ್ಕೇ ಸ್ಪೀಕರ್ ಬಿಟ್ಟು ಬಿಡಲಿಲ್ಲ. 'ಸದನದಲ್ಲಿ ಹೇಗೆ ನಡೆದುಕೊಳ್ಳಬೇಕು ಎಂಬುದು ನಿಮಗೆ ಗೊತ್ತಿಲ್ಲ. ಸದನ ಅಂದರೆ ತಮಾಷೆ ಎಂದುಕೊಂಡಿರುವಿರಾ? ಛೆ. ಇದು ಸುತರಾಂ ಸರಿಯಲ್ಲ' ಎಂದು ಹೇಳಿದರು. ಪರಿಸ್ಥಿತಿಯನ್ನು ಗ್ರಹಿಸಿದ ಡಿ.ಕೆ.ಶಿವಕುಮಾರ್ ಸಂಗಮೇಶ ಬಳಿ ಧಾವಿಸಿ ಶರ್ಟ್ ಹಾಕಿಸಿದರು. ಘಟನೆಯ ನಂತರ, 'ಸದನದ ಗೌರವಕ್ಕೆ ಚ್ಯುತಿ ತಂದ ಸಂಗಮೇಶ ಅವರನ್ನು ಅಮಾನತು ಮಾಡುವಂತೆ' ಕಾನೂನು ಮತ್ತು ಸಂಸದೀಯ ಸಚಿವ ಬಸವರಾಜ ಬೊಮ್ಮಾಯಿ ಪ್ರಸ್ತಾವನೆ ಮುಂದಿಟ್ಟರು. ಪ್ರಸ್ತಾವನೆಗೆ ಆಡಳಿತ ಪಕ್ಷ ಪೂರ್ಣ ಬೆಂಬಲ ವ್ಯಕ್ತಪಡಿಸಿತು. ಈ ಹಿನ್ನೆಲೆಯಲ್ಲಿ ಸಂಗಮೇಶ ಅವರನ್ನು ಮಾ. 12ನೇ ತಾರೀಕಿನವರೆಗೆ ಅಮಾನತು ಮಾಡಲಾಗಿದೆ ಎಂದು ಸ್ಪೀಕರ್ ಕಾಗೇರಿ ಪ್ರಕಟಿಸಿದರು.